**ಕರ್ನಾಟಕ ಸರ್ಕಾರ**

**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003.**

ಸಂಖ್ಯೆ:ಕಶಾಪಮೌನಿಮಂ: ಮೌ.ಮಾ.ವಿ.4:ಪೂ.ಸಿ.ಪರೀಕ್ಷೆ/2023-24 ದಿನಾಂಕ:27 -12-2023

# ಸು ತ್ತೋ ಲೆ

**ವಿಷಯ: ದ್ವಿತೀಯ ಪಿಯುಸಿ "ಪೂರ್ವ ಸಿದ್ಧತಾ ಪರೀಕ್ಷೆ"ಯನ್ನು ಜಿಲ್ಲಾ ಉಪನಿರ್ದೇಶಕರ ನೇತೃತ್ವದಲ್ಲಿ ಜಿಲ್ಲಾ ಹಂತದಲ್ಲಿ ನಡೆಸುವ ಕುರಿತು.**

ಉಲ್ಲೇಖ: ದಿನಾಂಕ: 5-12-2023 ರಂದು ನಡೆದ ಜಿಲ್ಲಾ ಪಿ.ಯು. ಉಪನಿರ್ದೇಶಕರುಗಳ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಚರ್ಚಿಸಿದಂತೆ.

------------

ಪ್ರತಿ ವರ್ಷವು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಪೂರ್ವಭಾವಿಯಾಗಿ ಜಿಲ್ಲಾ ಹಂತದಲ್ಲಿ ಪೂರ್ವ ಸಿದ್ಧತಾ ಪರೀಕ್ಷೆಯನ್ನು ನಡೆಸಿಕೊಂಡು ಬರುತ್ತಿರುವುದು ಸರಿಯಷ್ಟೆ. ರಾಜ್ಯಾದ್ಯಂತ 2024ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ-1 ನ್ನು ದಿನಾಂಕ: 02-03-2024 ರಿಂದ 22-03-2024 ರವರೆಗೆ ನಡೆಸಲು ತಾತ್ಕಾಲಿಕ ವೇಳಾಪಟ್ಟಿಯನ್ನು ಈಗಾಗಲೇ ಮಂಡಲಿಯ ಜಾಲತಾಣದಲ್ಲಿ ಪ್ರಕಟಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ಆಯಾ ಜಿಲ್ಲೆಗಳ ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, (ಪದವಿ ಪೂರ್ವ) ರವರು ಜಿಲ್ಲಾ ಮಟ್ಟದಲ್ಲಿ ವೇಳಾ ಪಟ್ಟಿ ಹಾಗೂ ಮಂಡಲಿಯ ನಿರ್ದೇಶನದಂತೆ ಪ್ರಾಯೋಗಿಕ ಪರೀಕ್ಷೆ ಹೊಂದಿರುವ ವಿಷಯಗಳಲ್ಲಿ 70 ಅಂಕಗಳು ಹಾಗೂ ಪ್ರಾಯೋಗಿಕ ಪರೀಕ್ಷೆ ಹೊಂದಿರದ ವಿಷಯಗಳಲ್ಲಿ 80 ಅಂಕಗಳಿಗೆ ಪ್ರಶ್ನೆಪತ್ರಿಕೆಗಳನ್ನು ಈಗಾಗಲೇ ಮಂಡಲಿಯ ಜಾಲತಾಣದಲ್ಲಿ ಅಪ್ ಲೋಡ್ ಮಾಡಿರುವ ಮಾದರಿ ಪ್ರಶ್ನೆಪತ್ರಿಕೆಗಳು ಹಾಗೂ ನೀಲನಕ್ಷೆಗಳ ಆಧಾರದ ಮೇಲೆ ವಿಭಾಗ ಮಟ್ಟದಲ್ಲಿ ಪ್ರಶ್ನೆಪತ್ರಿಕಾ ತಯಾರಿಕಾ ತರಬೇತಿ ಹೊಂದಿದ ಉಪನ್ಯಾಸಕರನ್ನು ಬಳಸಿಕೊಂಡು ಸಿದ್ಧಪಡಿಸುವುದು.

ತಮ್ಮ ವ್ಯಾಪ್ತಿಯಲ್ಲಿ ಬರುವ ಪದವಿ ಪೂರ್ವ ಕಾಲೇಜುಗಳಿಗೆ ಅಗತ್ಯಕ್ಕನುಗುಣವಾಗಿ ಪ್ರಶ್ನೆಪತ್ರಿಕೆಗಳನ್ನು ವಿತರಿಸಿ ಪೂರ್ವ ಸಿದ್ಧತಾ ಪರೀಕ್ಷೆಯನ್ನು **ದಿನಾಂಕ:16-01-2024 ರಿಂದ 30-01-2024 ರವರೆಗೆ** ಯಾವುದೇ ಲೋಪಗಳಿಗೆ ಅವಕಾಶ ನೀಡದಂತೆ ಪರೀಕ್ಷಾ ಗೌಪ್ಯತೆಯೊಂದಿಗೆ ಪರೀಕ್ಷೆಯನ್ನು ನಡೆಸಲು ಕ್ರಮ ವಹಿಸುವುದು.

Manjushree

ಅಧ್ಯಕ್ಷರು
ಕ.ಶಾ.ಪ.& ಮೌ.ನಿ.ಮಂಡಲಿ.
ಬೆಂಗಳೂರು.

ಇವರಿಗೆ:

1) ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರುಗಳು, ಶಾಲಾ ಶಿಕ್ಷಣ ಇಲಾಖೆ, (ಪದವಿ ಪೂರ್ವ) ರವರಿಗೆ ಅಗತ್ಯ ಕ್ರಮಕ್ಕಾಗಿ.
2) ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಜಿಲ್ಲಾ ಉಪನಿರ್ದೇಶಕರುಗಳು, ಶಾಲಾ ಶಿಕ್ಷಣ ಇಲಾಖೆ, (ಪದವಿ ಪೂರ್ವ) ರವರ ಮೂಲಕ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3) ಹಿರಿಯ ಸಹಾಯಕ ನಿರ್ದೇಶಕರು, (ಗಣಕ ಶಾಖೆ) ಇವರಿಗೆ ಮಂಡಲಿಯ ಜಾಲತಾಣದಲ್ಲಿ ಪ್ರಕಟಿಸುವ ಸಲುವಾಗಿ .
4) ಕಛೇರಿ ಪ್ರತಿ.

ಪ್ರತಿಯನ್ನು:

1) ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, (ಪದವಿ ಪೂರ್ವ) 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12 ರವರಿಗೆ ವಂದನೆಗಳೊಂದಿಗೆ ಮಾಹಿತಿಗಾಗಿ.
2) ನಿರ್ದೇಶಕರು, (ಪರೀಕ್ಷೆಗಳು) ಕ.ಶಾ.ಪ.&ಮೌ.ನಿ.ಮಂಡಲಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು, ರವರಿಗೆ.
3) ಉಪನಿರ್ದೇಶಕರು, (ಪಿಯು ಪರೀಕ್ಷೆ) ಕ.ಶಾ.ಪ.&ಮೌ.ನಿ.ಮಂಡಲಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು, ರವರಿಗೆ.